**ಕರ್ನಾಟಕ ಸರ್ಕಾರ**

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ ಬೆಂಗಳೂರು-560001**

---

**ಸಂಖ್ಯೆ: ಎಡಿಎಂ-2 (4)ವಾ.ಕ್ರಿ.ಯೋ. 01/2023-24** **ದಿನಾಂಕ: 23-05-2024.**

# ಜ್ಞಾಪನ

**ವಿಷಯ**:- ಶೈಕ್ಷಣಿಕ ಮಾರ್ಗದರ್ಶಿ 2024-25 ಪುಸ್ತಕವನ್ನು ಶಾಲಾ ಹಂತದಲ್ಲಿ ನಿಯಮಾನುಸಾರ ಮುದ್ರಿಸಿಕೊಂಡು ಅನುಷ್ಠಾನ ಮಾಡುವ ಕುರಿತು.

**ಉಲ್ಲೇಖ:-** ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ4(8) ವಾ.ಕ್ರಿ.ಯೋ.ಅ-01/2023-24 ದಿನಾಂಕ: 28.03.2024.

**********

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳ ಕುರಿತ ವಾರ್ಷಿಕ ಕ್ರಿಯಾ ಯೋಜನೆಗೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದ ಅನುಸಾರ 2024-25 ನೇ ಸಾಲಿನ ಶೈಕ್ಷಣಿಕ ಮಾರ್ಗದರ್ಶಿಯನ್ನು ಸಿದ್ದಪಡಿಸಲಾಗಿದೆ .

ಸದರಿ ಶೈಕ್ಷಣಿಕ ಮಾರ್ಗದರ್ಶಿಯು ಇಲಾಖೆಯ ಬೋಧಕ ಮತ್ತು ಬೋಧಕೇತರ ವೃಂದಗಳ ಅಧಿಕಾರಿಗಳು / ಸಿಬ್ಬಂದಿಗಳಿಗೆ, ವಿದ್ಯಾರ್ಥಿಗಳಿಗೆ ಹಾಗೂ ಶೈಕ್ಷಣಿಕ ಮೇಲುಸ್ತುವಾರಿ ಮಾಡುವ ನೋಡಲ್ ಅಧಿಕಾರಿಗಳಿಗೆ ಶಾಲೆಗಳಲ್ಲಿ ಮತ್ತು ಕಛೇರಿಗಳಲ್ಲಿ ಪ್ರಗತಿ ಪರಿಶೀಲಿಸಿ ಅಗತ್ಯ ಮಾರ್ಗದರ್ಶನ ನೀಡಲು ಬಹಳ ಉಪಯುಕ್ತವಾದ ಪುಸ್ತಕವಾಗಿರುವುದರಿಂದ ಸಾರ್ವತ್ರಿಕವಾಗಿ ಲಭ್ಯಪಡಿಸುವ ಸಲುವಾಗಿ ಇಲಾಖಾ ಅಂತರ್ಜಾಲ ತಾಣ https://schooleducation.karnataka.gov.in/ ರಲ್ಲಿ ಸಾಮಾನ್ಯ ಸುತ್ತೋಲೆ ವಿಭಾಗದಲ್ಲಿ ಅಳವಡಿಸಲಾಗಿದೆ.

ಪ್ರಯುಕ್ತ, ರಾಜ್ಯಾದ ಎಲ್ಲಾ ಶಾಲೆಗಳ ಮುಖ್ಯಸ್ಥರು ಈ ಮಾರ್ಗಸೂಚಿಯನ್ನು ಸದರಿ ಅಂತರ್ಜಾಲ ತಾಣದ ಮೂಲಕ ಡೌನ್‌ಲೋಡ್ ಮಾಡಿಕೊಂಡು, ನಿಯಮಾನುಸಾರ ಮುದ್ರಿಸಿಕೊಂಡು ಅನುಪಾಲನೆ ಮಾಡುವುದು. ಸದರಿ ಮುದ್ರಣ ಕಾರ್ಯಕ್ಕಾಗಿ ಆಯಾ ಶಾಲೆಯಲ್ಲಿ ಲಭ್ಯವಿರುವ ಅನುದಾನದಿಂದ ರೂ 350/- (ರೂ ಮುನ್ನೂರ ಐವತ್ತು ರೂಪಾಯಿಗಳು ಮಾತ್ರ) ಗಳ ಗರಿಷ್ಠ ಮಿತಿಯೊಳಗೆ ವೆಚ್ಚವನ್ನು ನಿಯಮಾನುಸಾರ ಭರಿಸಲು ತಿಳಿಸಿದೆ.

ಈ ಕುರಿತಾದ ಲೆಕ್ಕ-ಪತ್ರಗಳನ್ನು ಆಯಾ ಶಾಲೆಯಲ್ಲಿ ನಿಯಮಾನುಸಾರ ಕಾಯ್ದಿರಿಸಿ ತಪಾಸಣಾ ಸಮಯದಲ್ಲಿ ಹಾಜರು ಪಡಿಸಲು ಸೂಚಿಸುತ್ತಾ, ಈ ಶೈಕ್ಷಣಿಕ ಮಾರ್ಗಸೂಚಿಯನ್ನು ಶಾಲಾ ಮುಖ್ಯಸ್ಥರು ಮತ್ತು ಶಿಕ್ಷಕರು ಪ್ರತಿ ಮಾಹೆವಾರು ನಿಗದಿಪಡಿಸಿದ ದೈನಂದಿನ ಚಟುವಟಿಕೆಗಳಂತೆ ಪರಿಶೀಲಿಸಿ, ಅನುಪಾಲನೆ ಮಾಡುವುದರೊಂದಿಗೆ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಬಲವರ್ಧನೆಗೊಳಿಸಲು ಈ ಮೂಲಕ ಸೂಚಿಸಿದೆ.

ಸಹಿ/-

ಆಯುಕ್ತರು

ಶಾಲಾ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರುಗಳಿಗೆ ಅಗತ್ಯ ಕ್ರಮಕ್ಕಾಗಿ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).

**ಪ್ರತಿಯನ್ನು ಮಾಹಿತಿಗಾಗಿ**,

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.

2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
5. ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರ / ಸಹನಿರ್ದೇಶಕರ ವೃಂದದ ಎಲ್ಲಾ ಅಧಿಕಾರಿಗಳಿಗೆ.
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.
7. ಉಪನಿರ್ದೇಶಕರು(ಯೋಜನೆ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
8. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) & (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ ರವರಿಗೆ.
9. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ (ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ.
10. ಈ ಕಛೇರಿಯ ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ) ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಈ ಜ್ಞಾಪನವನ್ನು ಅಳವಡಿಸಲು ತಿಳಿಸಿದೆ.
11. ಕಛೇರಿ ಪ್ರತಿ.